**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 617/2021**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 2**

**ದಿನಾಂಕಃ** 10.08.2026 **ಸಿಡಬ್ಲ್ಯೂ 2**

| | |
|---|---|
| ಹೆಸರು | ವೀರೇಶ |
| ತಂದೆಯ ಹೆಸರು | ರೇಣುಕಪ್ಪ |
| ವಯಸ್ಸು | 54 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ದೊಗ್ಗಳ್ಳಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

2020 ರಲ್ಲಿ ಗಿರಜಮ್ಮರವರ ಮನೆ ಕಳ್ಳತನವಾಗಿದ್ದು ಆ ವಿಷಯಕ್ಕೆ ಪೋಲೀಸರು ನಮ್ಮ ಊರಿಗೆ ಬಂದಿದ್ದರು. ಸಾಕ್ಷಿ ಸಹಿ ಮಾಡು ಅಂತ ಪೋಲೀಸರು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ನಿಪಿ.2 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ.2 ಬಿ ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ ತೆಗೆದ ಪೋಟೋಗಳು ನಿಪಿ.3 ರಿಂದ 5 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 22.01.2020 ರಂದು ನನ್ನನ್ನು ಮತ್ತು ಚಾಸಾ.3 ರವರನ್ನು ಸಂಜೆ 4.30 ಗಂಟೆ ಸಮಯದಲ್ಲಿ ಗಿರಿಜಮ್ಮರವರ ಮನೆಯಲ್ಲಿ ಕಳ್ಳತನವಾದ ವಿಚಾರವಾಗಿ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿ. ಆ ಕಾಲಕ್ಕೆ ಪೋಟೋ ತೆಗೆದಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ** ಆರೋಪಿತರ ಪರ ಶ್ರೀ ಜಿ ಕೆ ಡಿ ವಕೀಲರಿಂದಃ

ಗಿರಿಜಮ್ಮರವರ ಮನೆಯಲ್ಲಿ ಯಾವುದೇ ರೀತಿಯ ಕಳ್ಳತನವಾಗಿರುವುದಿಲ್ಲ ನಾನು ಅವರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಟೋವನ್ನು ಯಾವ ವಿಷಯಕ್ಕಾಗಿ ತೆಗೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ ಎಂದರೆ ಸರಿ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ.